# ಕರ್ನಾಟಕ ಸರ್ಕಾರ

ಸಂಖ್ಯೆ. ಗ್ರಾಅಪ 282 ಸೇಶಿಕಾ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ.18.11.2017

## ಅಧಿಸೂಚನೆ

ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಸೇವೆಗೆ ಸೇರಿದ ಈ ಕೆಳಕಂಡ ಸಹಾಯಕ ಇಂಜಿನಿಯರ್‌ಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 32ರಡಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಲ್ಲಿ (ವೇತನ ಶ್ರೇಣಿ ರೂ. 28100 – 50100 ) ಸ್ವತಂತ್ರ ಪ್ರಭಾರದಲ್ಲಿರಿಸಿ, ಅವರ ಹೆಸರಿನ ಮುಂದೆ ಸೂಚಿಸಿರುವ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ:-

| ಕ್ರ.ಸಂ. | ಹೆಸರು ಮತ್ತು ಕರ್ತವ್ಯನಿರ್ವಹಿಸುತ್ತಿರುವ ಹುದ್ದೆ / ಸ್ಥಳ | ಕೆ.ಸಿ.ಎಸ್.ಆರ್. ನಿಯಮ 32ರಡಿ ಸ್ವತಂತ್ರ ಪ್ರಭಾರದಲ್ಲಿರಿಸಿ ಸ್ಥಳನಿಯುಕ್ತಿಗೊಳಿಸಿದ ಹುದ್ದೆ / ಸ್ಥಳ |
|---|---|---|
| 1. | ಶ್ರೀ ಎಲ್. ಶ್ರೀಕಂಠಯ್ಯ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಪೊನ್ನಂಪೇಟೆ. | ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮಡಿಕೇರಿ – ಖಾಲಿ ಹುದ್ದೆ |
| 2. | ಶ್ರೀ ಪಿ.ಎಂ.ಶೆಟ್ಟಿಕೇರಿ, ಸಹಾಯಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಹಾವೇರಿ | ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು – ಖಾಲಿ ಹುದ್ದೆ. |
| 3. | ಶ್ರೀ ಸುರೇಶ ಗೋವಿಂದ ನಾಯ್ಕ, ಸಹಾಯಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಕಾರವಾರ. | ತಾಂತ್ರಿಕ ಸಹಾಯಕರು, ಯೋಜನಾ ವಿಭಾಗ, ಕಾರವಾರ – ಶ್ರೀ ವಿ.ವಿ.ತೇಲಂಗ ಇವರ ಸೇವೆಯನ್ನು ಲೋಕೋಪಯೋಗಿ ಇಲಾಖೆಯು ಹಿಂಪಡೆದಿರುವುದರಿಂದ ಖಾಲಿ ಇರುವ ಹುದ್ದೆಗೆ. |

ಷರತ್ತುಗಳು:

(1) ಕ.ನಾ.ಸೇ.ನಿ. ನಿಯಮ 32ರಡಿ ಮಾಡಲಾಗಿರುವ ಸ್ವತಂತ್ರ ಪ್ರಭಾರ ವ್ಯವಸ್ಥೆಯು ಕ್ರಮಬದ್ಧ ಮುಂಬಡ್ತಿ ಬದಲಿಗೆ ಮಾಡುವ ಒಂದು ತಾತ್ಕಾಲಿಕ ವ್ಯವಸ್ಥೆ ಆಗಿದೆ. ಅದು ಮುಂಬಡ್ತಿ ಅಲ್ಲ. ಸ್ವತಂತ್ರ ಪ್ರಭಾರದಲ್ಲಿರಿಸಿರುವ ಆದೇಶವನ್ನು ಯಾವುದೇ ಸಂದರ್ಭದಲ್ಲಿಯಾದರೂ ಹಿಂದಕ್ಕೆ ಪಡೆಯಲು ಆಸ್ಪದವಿರುತ್ತದೆ.

(2) ಈ ವ್ಯವಸ್ಥೆಯು ತಾತ್ಕಾಲಿಕವಾಗಿದ್ದು, ಪೂರ್ವಾನ್ವಯ ಮುಂಬಡ್ತಿಗೆ ಹಕ್ಕೋತ್ತಾಯ ಮಾಡುವಂತಿಲ್ಲ.

(3) ಈ ವ್ಯವಸ್ಥೆಯು ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ 09.02.2017 ರಂದು ಸಿವಿಲ್ ಅಪೀಲ್ ಸಂಖ್ಯೆ 2368/2011ರಲ್ಲಿ ಶ್ರೀ ಬಿ.ಕೆ.ಪವಿತ್ರ ಪ್ರಕರಣದಲ್ಲಿ ನೀಡಿರುವ ತೀರ್ಪಿನ ವಿರುದ್ಧ ಸಲ್ಲಿಸಲಾಗಿರುವ ಪುನರ್ ಪರಿಶೀಲನಾ ಅರ್ಜಿಯ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ.

(4) ಸರ್ಕಾರದ ಆದೇಶ ಸಂಖ್ಯೆ: ಆಇ 03 ಸೇನಿಸೇ 2012 ದಿನಾಂಕ 14.06.2012 ರನ್ವಯ ಸ್ವತಂತ್ರ ಪ್ರಭಾರದಲ್ಲಿರಿಸಲಾಗಿರುವ ಹುದ್ದೆಯ ವೇತನ ಶ್ರೇಣಿಯ ಕನಿಷ್ಠ ವೇತನದ ಶೇ. 7.5 ರಷ್ಟು ಪ್ರಭಾರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

18/11/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಆಯುಕ್ತರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಡಗು ಜಿಲ್ಲೆ, ಮಡಿಕೇರಿ / ಹಾವೇರಿ / ಉತ್ತರ ಕನ್ನಡ ಜಿಲ್ಲೆ, ಕಾರವಾರ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
7. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು
8. ಸಂಬಂಧಪಟ್ಟ ಅಧಿಕಾರಿಗಳಿಗೆ.
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ)
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
12. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
13. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.